ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ –೧೬೦	ಬೆಂಗಳೂರು, ಬುಧವಾರ, ೧೭ ಸೆಪ್ಟೆಂಬರ್, ೨೦೨೫ (ಭಾದ್ರಪದ ೨೬, ಶಕವರ್ಷ ೧೯೪೭)	ಸಂಚಿಕೆ ೧೮೦
Volume - 160	BENGALURU, WEDNESDAY, 17 SEPTEMBER, 2025 (BHADRAPADA 26, SHAKAVARSHA 1947)	Issue 180

ಭಾಗ ೨ಎ

ಸರ್ಕಾರದ ಮತ್ತು ಖಾಸಗಿ ಜಾಹೀರಾತುಗಳು, ಲೋಕಸೇವಾ ಆಯೋಗದ ಜಾಹೀರಾತುಗಳು, ನೇಮಕಾತಿ ಸಮಿತಿಗಳ ಜಾಹೀರಾತುಗಳು

ಕರ್ನಾಟಕ ಸರ್ಕಾರ

ಸಂಖ್ಯೆ:ಇಡಿ 183 ಡಿಸಿಇ 2024(ಇ)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಡಾ. ಬಿ ಆರ್ ಅಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:09-09-2025

ಅಧಿಸೂಚನೆ

ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ನೇಮಕಾತಿ) (ವಿಶೇಷ) ನಿಯಮಗಳು, 2020ರನ್ವಯ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ವಿವಿಧ ವಿಷಯಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇಮಕಾತಿಯಲ್ಲಿ ಅಭ್ಯರ್ಥಿಯಾದ ಶ್ರೀ ಮಂಜುನಾಥ ಜಿ., ಇವರು ಸದರಿ ಹುದ್ದೆಯ ನೇಮಕಾತಿಗೆ ಒಟ್ಟು ಎರಡು ವಿಷಯಗಳಿಗೆ ಅಂದರೆ ರಸಾಯನ ಶಾಸ್ತ್ರ ಮತ್ತು ಇತಿಹಾಸ ವಿಷಯಗಳಿಗೆ ಅರ್ಜಿಯನ್ನು ಸಲ್ಲಿಸಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ರಸಾಯನ ಶಾಸ್ತ್ರ ವಿಷಯದಲ್ಲಿ ಒಟ್ಟು 61.05 ಅಂಕಗಳನ್ನು ಹಾಗೂ ಇತಿಹಾಸ ವಿಷಯದಲ್ಲಿ ಒಟ್ಟು 114 ಅಂಕಗಳನ್ನು ಗಳಿಸಿರುತ್ತಾರೆ.

ಶ್ರೀ ಮಂಜುನಾಥ. ಜಿ. ಇವರು ಇತಿಹಾಸ ವಿಷಯದಲ್ಲಿ ಹೆಚ್ಚು ಅಂಕಗಳನ್ನು ಗಳಿಸಿರುವುದರಿಂದ ರಸಾಯನ ಶಾಸ್ತ್ರ ವಿಷಯದಲ್ಲಿ ಕಡಿಮೆ ಅಂಕಗಳನ್ನು ಗಳಿಸಿರುವುದರಿಂದ ಸರ್ಕಾರದ ದಿನಾಂಕ:17.05.2023ರ ಪತ್ರದಲ್ಲಿನ ನಿರ್ದೇಶನದಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸದರಿಯವರನ್ನು ರಸಾಯನ ಶಾಸ್ತ್ರ ವಿಷಯದ ಪಟ್ಟಿಯಿಂದ ತೆಗೆದುಹಾಕಿ ಸದರಿ ಖಾಲಿಯಾದ ಹುದ್ದೆಗೆ ಶ್ರೀ ಹರೀಶ್ ಪ್ರಭು ಆರ್., ಇವರನ್ನು ರಸಾಯನ ಶಾಸ್ತ್ರ ವಿಷಯದಲ್ಲಿ ಹಾಗೂ ಶ್ರೀ ಮಂಜುನಾಥ ಜಿ., ಇವರನ್ನು ಇತಿಹಾಸ ವಿಷಯದಲ್ಲಿ ಆಯ್ಕೆ ಮಾಡಿ ಸಲ್ಲಿಸಿದ್ದ ಆಯ್ಕೆ ಪಟ್ಟಿಯನ್ನು ಪರಿಶೀಲಿಸಿ ಅಂತಿಮ ಆಯ್ಕೆ ಪಟ್ಟಿಯನ್ನು ಅಧಿಸೂಚನೆ ಸಂಖ್ಯೆ: ಇಡಿ 92 ಡಿಸಿಇ 2023(ಇ), ದಿನಾಂಕ: 03.11.2023ರಲ್ಲಿ ಪ್ರಕಟಿಸಲಾಗಿತ್ತು.

ಆದರೆ, ಮಂಜುನಾಥ. ಜಿ. ಇವರು ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿಯಲ್ಲಿ ಅರ್ಜಿ ಸಂಖ್ಯೆ 5115/2023ರ ಮೂಲಕ ದಾವೆ ಸಲ್ಲಿಸಿ ತಮ್ಮನ್ನು ರಸಾಯನ ಶಾಸ್ತ್ರ ವಿಷಯದಲ್ಲಿ ಆಯ್ಕೆ ಮಾಡುವಂತೆ ಅರ್ಜಿ ಸಲ್ಲಿಸಿದ್ದು, ಮಾನ್ಯ ನ್ಯಾಯ ಮಂಡಳಿಯು

ದಿನಾಂಕ:26.03.2024ರಂದು ಈ ಕೆಳಕಂಡಂತೆ ಆದೇಶಿಸಿದೆ. (ಅರ್ಜಿ ಸಂಖ್ಯೆ: 3611/2023 C/w 5115/2023)

16. In view of the discussions above, we summarise our conclusions as follows.

1. A3611/2023 is dismissed.

2. A5115/2023 is allowed in the following terms.

    1. The Revised final select list dated 2.06.2023 as at Annexure A23 and the Gazette Notification dated 3.11.2023 as at Annexure A24 to the extent of non-selection of the applicant and the inclusion of the fourth respondent, in the selection list in Residual Parent Cadre in Group C category is set aside.

    2. The third respondent is directed to publish a revised select list including the name of the applicant in the Residual Parent Cadre in Chemistry Subject in the Group C category as in the select list of 3.03.2023 as at Annexure A20.

    3. It is without prejudice to the fourth respondent being considered for inclusion in the Additional List if entitled to be so included in terms of the rules.

ಮಾನ್ಯ ನ್ಯಾಯ ಮಂಡಳಿಯ ಆದೇಶವನ್ನು ಪಾಲಿಸುವ ನಿಟ್ಟಿನಲ್ಲಿ ರಸಾಯನಶಾಸ್ತ್ರ, ವಿಷಯದ (Residual Parent Cadre) (NHK) ರೆಗ್ಯೂಲರ್ ಆಯ್ಕೆಪಟ್ಟಿಯಲ್ಲಿ ಸಾಮಾನ್ಯ ಮೀಸಲಾತಿಯಲ್ಲಿ ಆಯ್ಕೆಯಾಗಿದ್ದ 4ನೇ ಪ್ರತಿವಾದಿ ಶ್ರೀ ಹರೀಶ್ ಪ್ರಭು ಇವರನ್ನು ಆಯ್ಕೆಪಟ್ಟಿಯಿಂದ ಕೈಬಿಟ್ಟು ಶ್ರೀ ಮಂಜುನಾಥ ಜಿ., ಇವರನ್ನು (Residual Parent Cadre) (NHK) ರೆಗ್ಯೂಲರ್ ಗ್ರೂಪ್-ಸಿ ವೃಂದದಲ್ಲಿ ಸಾಮಾನ್ಯ ಮೀಸಲಾತಿಯಲ್ಲಿ ಆಯ್ಕೆಮಾಡಿ ರಸಾಯನಶಾಸ್ತ್ರ, ವಿಷಯದ ಪರಿಷ್ಕೃತ ಆಯ್ಕೆ ಪಟ್ಟಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸಲ್ಲಿಸಿರುತ್ತದೆ.

ಅದರಂತೆ 2021ನೇ ಸಾಲಿನ ರಸಾಯನಶಾಸ್ತ್ರ, ವಿಷಯದ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಉಳಿಕೆ ಮೂಲ ವೃಂದದಲ್ಲಿ(NHK) ಈ ಕೆಳಕಂಡಂತೆ ಪರಿಷ್ಕೃತ ಆಯ್ಕೆ ಪಟ್ಟಿಯನ್ನು ಈ ಮೂಲಕ ಪ್ರಕಟಿಸಲಾಗಿದೆ.

ಈ ಮೂಲಕ ಪ್ರಕಟಿಸಲಾದ ಆಯ್ಕೆ ಪಟ್ಟಿಯು ಹಾಗೂ ಅದರನ್ವಯ ಕೈಗೊಳ್ಳುವ ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಸರ್ಕಾರವು ಕಾಲಕಾಲಕ್ಕೆ ಹೊರಡಿಸಿರುವ ಅಧಿನಿಯಮಗಳು/ಆದೇಶಗಳು/ಅಧಿಸೂಚನೆಗಳು/ಸುತ್ತೋಲೆಗಳಲ್ಲಿನ ಷರತ್ತು, ನಿಬಂಧನೆಗಳಿಗೆ ಒಳಪಟ್ಟಿರುತ್ತದೆ ಹಾಗೂ ಈ ಬಗ್ಗೆ ಮಾನ್ಯ ಸಕ್ಷಮ ನ್ಯಾಯಾಲಯಗಳು ನೀಡುವ/ನೀಡಿರುವ ತೀರ್ಪುಗಳಿಗೆ/ಆದೇಶಗಳಿಗೆ ಒಳಪಟ್ಟಿರುತ್ತದೆ. ಆಯ್ಕೆ ಪಟ್ಟಿಯ ಕೊನೆಯಲ್ಲಿ ನಮೂದಿಸಿರುವ ವಿವಿಧ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳಲ್ಲಿ ಆಗುವ ಅಂತಿಮ ತೀರ್ಮಾನದ/ತೀರ್ಮಾನವಾಗಿರುವ ಪಾಲನೆಯ ಷರತ್ತಿಗೆ ಈ ಆಯ್ಕೆ ಪಟ್ಟಿಯಲ್ಲಿನ ಅಭ್ಯರ್ಥಿಯ ಅಭ್ಯರ್ಥಿತನವು ಒಳಪಟ್ಟಿರುತ್ತದೆ.

ಈ ಮೂಲಕ ಪ್ರಕಟಿಸಲಾದ ಅಂತಿಮ ಆಯ್ಕೆ ಪಟ್ಟಿಯಲ್ಲಿನ ಅಭ್ಯರ್ಥಿಯ ಪೂರ್ವಚರಿತ್ರೆಯು ತೃಪ್ತಿಕರವಾಗಿರುವ ಕುರಿತಂತೆ ಮತ್ತು ಇತರೆ ಅವಶ್ಯಕವೆನಿಸುವ ಅಗತ್ಯ ವಿಚಾರಣೆ/ತಪಾಸಣೆಯ ನಂತರ ಅಭ್ಯರ್ಥಿತನವು ತೃಪ್ತಿಕರವಾಗಿದೆ ಎಂದು ನೇಮಕಾತಿ ಪ್ರಾಧಿಕಾರ ತೀರ್ಮಾನಿಸಿದಲ್ಲಿ ಮಾತ್ರ ಅಭ್ಯರ್ಥಿಯು ನೇಮಕಾತಿ ಆದೇಶಕ್ಕೆ ಅರ್ಹರಾಗುತ್ತಾರೆ ಹೊರತು, ಅಂತಿಮ ಆಯ್ಕೆ ಪಟ್ಟಿಯಲ್ಲಿ ಹೆಸರು ನಮೂದಾಗಿದೆ ಎಂಬ ಕಾರಣದಿಂದಾಗಿ ಅಭ್ಯರ್ಥಿಯು ಯಾವುದೇ ಹಕ್ಕನ್ನು ಹೊಂದಿದಂತಾಗುವುದಿಲ್ಲ.

ಪರಿಷ್ಕೃತ ಆಯ್ಕೆ ಪಟ್ಟಿ

POST : Regular-Group C
Subject : CHE-Chemistry

Residual Parent Cadre-(NHK)

Sl No	Reg No	NAME	DOB	Reservations as Verified and Eligible	SCORE	Category Selected
1	U3244	MANJUNATHA G	20-MAR-82	3B, Grp-C	61.5	GM

Note:-

1. This Selection List and further recruitment process is subject to relevant Government rules / orders / notifications / circulars / Hon'ble court/s orders regulating the conditions of recruitment from time to time.

2. The Selection of all the Candidates is subject to final orders of Hon'ble High Court in W.P. Nos. 841/2023, 1350/2023, 101549/2023, 101528/2023, 6321/2023, 101359/2023, 5093/2022, 2623/2022, 22005/2021, 4543/2022, 100983/2022, 5058/2022, 15679/2023 and Hon'ble KAT in Appl. Nos. 3148/2022, 5795/2022 & 4773/2022, 3967/2022, 3904/2022, 3150/2022, 3849/2022, 5802/2022, 1181/2023, 1161/2023, 362/2023, 956-965/2023, 1016/2023, 1326/2023, 1331/2023, 1310-1312/2023, 1124/2023, 1441/2023, 1579/2023, 1399/2023, 1342/2023, 20202/2023, 413/2023, 1489/2023, 228/2023, 1846/2023, 1526/2023, 1551/2023, 1277/2023, 727/2023, 5041/2021, 2881-2882/2023, 2598/2023, 1494/2023, 3611/2023, 1520/2023, 2139/2023 as noted and other relevant cases.
3. This selection list and the subsequent recruitment process to be conducted based on this selection list are hereby notified by the Hon'ble Karnataka Administrative Tribunal vide Application No.: 1316/2023 dated: 23.11.2023 and Hon'ble Karnataka State High Court vide Writ Petition No.: 8125/2024 and 28967/2023(S-KSAT) dated: 10.07.2024 If an application/appeal is filed in the Hon'ble High Court/Supreme Court against the judgement given, the said application/appeal shall be subject to the final judgement/order passed by the Hon'ble Court.
4. The Selection of above selected candidate is subject to the final order of the Honourable Court/s.

ಅಭ್ಯರ್ಥಿಯ ಅಭ್ಯರ್ಥಿತನವು ಮತ್ತು ನೇಮಕಾತಿ ಆದೇಶ ಪಡೆಯಲು ಅರ್ಹತೆಯು ಈ ಕೆಳಕಂಡ ಷರತ್ತುಗಳಿಗೊಳಪಟ್ಟಿದೆ.

1. ಅಭ್ಯರ್ಥಿಯ ಶೈಕ್ಷಣಿಕ ಅರ್ಹತೆಯ ದಾಖಲೆಗಳಲ್ಲಿ ಯಾವುದೇ ನ್ಯೂನತೆಗಳು ಕಂಡು ಬಂದಲ್ಲಿ ಅವರ ಅಭ್ಯರ್ಥಿತನ ತಂತಾನೆ ರದ್ದಾಗುತ್ತದೆ;
2. ಅಭ್ಯರ್ಥಿಯ ಮೀಸಲಾತಿ, ಜಾತಿ ಮತ್ತು ಆದಾಯಕ್ಕೆ ಸಂಬಂಧಿಸಿದ ದಾಖಲೆಗಳು ಸಿಂಧುವಾಗಿವೆ ಎಂದು ಸಂಬಂಧಪಟ್ಟ ಇಲಾಖೆ/ಪ್ರಾಧಿಕಾರವು ದೃಢೀಕರಿಸಬೇಕು;

3. ಅಭ್ಯರ್ಥಿಯ ಅಭ್ಯರ್ಥಿತನ ಮತ್ತು ಆಯ್ಕೆಗೆ ಸಂಬಂಧಿಸಿದಂತೆ ನೇಮಕಾತಿ ಪ್ರಾಧಿಕಾರದ ತೀರ್ಮಾನವು ಅಂತಿಮವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಂಜಯ್. ಬಿ. ಎಸ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ).

PR-115

ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 92 ಡಿಸಿಇ 2023(ಇ)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಡಾ. ಬಿ ಆರ್ ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:09-09-2025.

<u>ಅಧಿಸೂಚನೆ</u>

ಕಾಲೇಜು ಶಿಕ್ಷಣ ಇಲಾಖೆಯ ಆಡಳಿತ ವ್ಯಾಪ್ತಿಗೆ ಒಳಪಡುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ವಿವಿಧ ವಿಷಯಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇರ ನೇಮಕಾತಿಗೆ ಆಯ್ಕೆ ಪ್ರಾಧಿಕಾರವಾದ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸರ್ಕಾರಕ್ಕೆ ಸಲ್ಲಿಸಿದ ಅಂತಿಮ ಆಯ್ಕೆ ಪಟ್ಟಿಯನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 92 ಡಿಸಿಇ 2023(ಇ), ದಿನಾಂಕ:03.11.2023 ರಲ್ಲಿ ಪ್ರಕಟಿಸಿದೆ. ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ಸಹಾಯಕ ಪ್ರಾಧ್ಯಾಪಕರ ನೇಮಕಾತಿ) (ವಿಶೇಷ) ನಿಯಮಗಳು, 2020 ನಿಯಮ 9 ರ ಉಪನಿಯಮ (2) ಮತ್ತು (3) ರನ್ವಯ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ಅಂತಿಮ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಅರ್ಹತೆಯ ದೃಢೀಕರಣಕ್ಕೆ ಸಂಬಂಧಿಸಿದಂತೆ ಅಗತ್ಯ ವಿಚಾರಣೆಗಳು ಪೂರ್ಣಗೊಂಡಿರುವ ಈ ಕೆಳಕಂಡ ಅಭ್ಯರ್ಥಿಗಳನ್ನು ವೇತನ ಶ್ರೇಣಿ ರೂ.57700-182400 (ಯುಜಿಸಿ ವೇತನ ಶ್ರೇಣಿ) ರ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ನೇಮಿಸಿ ಆದೇಶಿಸಿದೆ.

ವಿಷಯ: MAT-Mathematics
ಹುದ್ದೆ: Regular
ವೃಂದ: NON-HK (ಸಾಮಾನ್ಯ ಮಿಕ್ಕುಳಿದ ವೃಂದ)

Sl. No.	Dated 03.11.2023 Govt. Notification Sl. No.	NAME	DOB	SELECTED CATEGORY
01	10	PRIYA KABADAGI	05-07-1991	GMW
02	13	GAJENDRA B	18-11-1996	GM

ವಿಷಯ: POL-Political Science
ಹುದ್ದೆ: Regular
ವೃಂದ: NON-HK (ಸಾಮಾನ್ಯ ಮಿಕ್ಕುಳಿದ ವೃಂದ)

Sl. No.	Dated 03.11.2023 Govt. Notification Sl. No.	NAME	DOB	SELECTED CATEGORY
01	23	AMARESH BELLIHAL	22-05-1982	GM

ಈ ಅಧಿಸೂಚನೆಯ ಪ್ರತಿಯನ್ನು ಮೇಲೆ ನಮೂದಿಸಿರುವ ಅಭ್ಯರ್ಥಿಗಳ ಖಾಯಂ ವಿಳಾಸಕ್ಕೆ ಪ್ರತ್ಯೇಕವಾಗಿ ನೋಂದಣಿ ಅಂಚೆಯ ಮೂಲಕ ರವಾನಿಸಲು ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರು ಕ್ರಮವಹಿಸುವುದು.

ಸದರಿ ಹುದ್ದೆಗೆ ನೇಮಕಗೊಂಡ ಅಭ್ಯರ್ಥಿಗಳು ಈ ಆದೇಶ ತಲುಪಿದ 15 (ಹದಿನೈದು) ದಿನಗಳೊಳಗೆ ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ, ಬೆಂಗಳೂರು ಇವರಲ್ಲಿ **ತೆರಳಿ, ಕೌನ್ಸಿಲಿಂಗ್ ಪ್ರಕ್ರಿಯೆ ನಡೆಸಿ, ಸ್ಥಳ ನಿಯುಕ್ತಿಗೊಳಿಸುವಂತೆ ಮನವಿ ಸಲ್ಲಿಸುವುದು.** ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರು ನಿಯಮಾನುಸಾರ ಜೇಷ್ಠತೆಯ ಆಧಾರದ ಮೇಲೆ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ನಡೆಸಿ ಅಭ್ಯರ್ಥಿಗೆ ಸ್ಥಳನಿಯುಕ್ತಿ ಆದೇಶವನ್ನು ನೀಡುವುದು. ಅಭ್ಯರ್ಥಿಗಳು ಸ್ಥಳ ನಿಯುಕ್ತಿಗೊಳಿಸಿದ ಕಾಲೇಜಿನಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡ ದಿನಾಂಕದಿಂದ ವೇತನ ಹಾಗೂ ಇತರ ಭತ್ಯೆಗಳನ್ನು ಪಡೆಯಲು ಅರ್ಹರಿರುತ್ತಾರೆ.

ಸರ್ಕಾರದ ಪೂರ್ವಾನುಮತಿ ಪಡೆಯದೆ ನಿಗಧಿತ ಅವಧಿಯೊಳಗೆ ವರದಿ ಮಾಡಿಕೊಳ್ಳಲು ವಿಫಲರಾಗುವ ಅಭ್ಯರ್ಥಿಯ ನೇಮಕಾತಿ ಆದೇಶವು ತಾನಾಗಿಯೇ ಅನೂರ್ಜಿತವಾಗುತ್ತದೆ.

ಷರತ್ತುಗಳು:

1. ಇದು ಸ್ಪರ್ಧಾತ್ಮಕ ಪರೀಕ್ಷೆಯ ಆಧಾರದ ಮೇಲೆ ಮಾಡಿರುವ ನೇರ ನೇಮಕಾತಿಯಾಗಿರುವುದರಿಂದ ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ಸಹಾಯಕ ಪ್ರಾಧ್ಯಾಪಕರ ನೇಮಕಾತಿ) (ವಿಶೇಷ) ನಿಯಮಗಳು, 2020 ರನ್ವಯ ಹಾಗೂ ಕರ್ನಾಟಕ ನಾಗರಿಕ ಸೇವಾ (ಜ್ಯೇಷ್ಠತೆ) ನಿಯಮಗಳು, 1957 ರ ನಿಯಮ (5) ರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 92 ಡಿಸಿಇ 2023 (ಇ) ದಿನಾಂಕ:03.11.2023 ರಲ್ಲಿ ಪ್ರಕಟಿಸಿರುವ ಅಂತಿಮ ಆಯ್ಕೆ ಪಟ್ಟಿಯಲ್ಲಿನ ಜೇಷ್ಠತೆಯು ಅಂತಿಮವಾಗಿರುತ್ತದೆ.
2. ದಿನಾಂಕ:03.11.2023 ರಂದು ಪ್ರಕಟಿಸಿರುವ ಅಂತಿಮ ಆಯ್ಕೆ ಪಟ್ಟಿಯಲ್ಲಿನ ಇನ್ನುಳಿದ ಅರ್ಹ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಅಗತ್ಯ ವಿಚಾರಣೆಗಳು ತೃಪ್ತಿಕರವಾಗಿ ಪೂರ್ಣಗೊಂಡ ನಂತರ ಪ್ರತ್ಯೇಕ ನೇಮಕಾತಿ ಆದೇಶ ಹೊರಡಿಸಲಾಗುವುದು. ಅಂತಹ ಅಭ್ಯರ್ಥಿಗಳ ಅರ್ಹತೆ/ಜೇಷ್ಠತೆಗೆ ಯಾವುದೇ ಬಾಧೆಯಾಗುವುದಿಲ್ಲ. ಯಾವುದೇ ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾದ ದಿನಾಂಕವನ್ನಾಧರಿಸಿ ಜೇಷ್ಠತೆಯನ್ನು ಕ್ಲೇಮು ಮಾಡುವ ಹಕ್ಕುಳ್ಳವನಾಗಿರುವುದಿಲ್ಲ.
3. ನೇಮಕಗೊಂಡ ಅಭ್ಯರ್ಥಿಗಳು ಸ್ಥಳನಿಯುಕ್ತಿಗೊಳಿಸಿದ ಕಾಲೇಜಿನ ಪ್ರಾಂಶುಪಾಲರ ಸಮಕ್ಷಮದಲ್ಲಿ ಕಾರ್ಯವರದಿ ಮಾಡಿಕೊಳ್ಳುವ ಸಮಯದಲ್ಲಿ ತಮ್ಮ ವಿದ್ಯಾರ್ಹತೆಗೆ ಸಂಬಂಧಪಟ್ಟ ಮೂಲ ದಾಖಲೆಗಳನ್ನು ಹಾಜರುಪಡಿಸತಕ್ಕದ್ದು.
4. ಈ ನೇಮಕಾತಿಯು ಸ್ಥಳನಿಯುಕ್ತಿಗೊಳಿಸಿದ ಹುದ್ದೆಯಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷಗಳ ಪರೀಕ್ಷಾರ್ಥ ಅವಧಿಯನ್ನು ಅಭ್ಯರ್ಥಿಯು ತೃಪ್ತಿಕರವಾಗಿ ಪೂರೈಸುವ ಷರತ್ತಿಗೊಳಪಟ್ಟಿರುತ್ತದೆ.
5. ಅಭ್ಯರ್ಥಿಯು ಪರೀಕ್ಷಾರ್ಥ ಅವಧಿಯಲ್ಲಿ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಉತ್ತೀರ್ಣರಾಗತಕ್ಕದ್ದು.
6. ನೇಮಕಾತಿಗೊಂಡ ಅಭ್ಯರ್ಥಿಗಳು ಕರ್ನಾಟಕ ಸಿವಿಲ್ ಸೇವೆಗಳು (ಕಂಪ್ಯೂಟರ್ ಸಾಕ್ಷಾರತಾ ಪರೀಕ್ಷೆ) ನಿಯಮಗಳು, 2012 ರನ್ವಯ ಹಾಗೂ ಸದರಿ ನಿಯಮಗಳಿಗೆ ಸರ್ಕಾರವು ಕಾಲ ಕಾಲಕ್ಕೆ ಹೊರಡಿಸಿರುವ/ಹೊರಡಿಸುವ ನಿಯಮಗಳನ್ವಯ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವುದು ಕಡ್ಡಾಯವಾಗಿರುತ್ತದೆ.
7. ನೇಮಕಗೊಂಡ ಅಭ್ಯರ್ಥಿಗಳಿಗಾಗಿ ಕೈಗೊಳ್ಳಲಾಗುವ ಫೌಂಡೇಶನ್ ಕೋರ್ಸ್‌ಗೆ (ಬುನಾದಿ ತರಬೇತಿ) ಹಾಜರಾಗುವುದು ಕಡ್ಡಾಯವಾಗಿರುತ್ತದೆ.
8. ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಅವಶ್ಯಕತೆ ಇರುವ ಓರಿಯಂಟೇಷನ್ ಮತ್ತು ರೆಫ್ರೆಶರ್ ಕೋರ್ಸ್ ತರಬೇತಿಯನ್ನು ಪೂರೈಸತಕ್ಕದ್ದು.

9. ಅಭ್ಯರ್ಥಿಯು ಸ್ಥಳನಿಯುಕ್ತಿಗೊಳಿಸಿದ ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ನಿಯಮಾನುಸಾರ ವೇತನ, ಭತ್ಯೆ ಇತ್ಯಾದಿ ಪಡೆಯಲು ಅರ್ಹರಿರುತ್ತಾರೆ.
10. ಅಭ್ಯರ್ಥಿಗಳು ಕಾರ್ಯವರದಿ ಮಾಡಿಕೊಳ್ಳಲು ಹಾಗೂ ಸ್ಥಳನಿಯುಕ್ತಿಗೊಳಿಸಿದ ಹುದ್ದೆಯಲ್ಲಿ ಕರ್ತವ್ಯಕ್ಕೆ ಹಾಜರಾಗಲು ಯಾವುದೇ ಭತ್ಯೆಗಳನ್ನು ಪಡೆಯಲು ಅರ್ಹರಿರುವುದಿಲ್ಲ.
11. ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ (ಎಸ್.ಪಿ.ಎಲ್) 04 ಪಿಇಟಿ 2005, ದಿನಾಂಕ:31.03.2006 ರಲ್ಲಿನ ಹೊಸ ಪಿಂಚಣಿ ಯೋಜನೆ (NPS) ವ್ಯಾಪ್ತಿಗೆ ಅನ್ವಯವಾಗುತ್ತದೆ.
12. ಈಗಾಗಲೇ ಸರ್ಕಾರಿ ಸೇವೆಯಲ್ಲಿರುವ ಸಿಬ್ಬಂದಿಗಳು ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಗಳ ನಿಯಮ 252(ಬಿ) ರನ್ವಯ ಸೇವೆಯಿಂದ ಬಿಡುಗಡೆ ಹೊಂದಿ, ಸ್ಥಳ ನಿಯುಕ್ತಿಗೊಳಿಸಲಾದ ಕಾಲೇಜಿನಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು. ಈ ಬಗ್ಗೆ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು ದೃಢೀಕರಿಸತಕ್ಕದ್ದು.
13. ಅಭ್ಯರ್ಥಿಗಳು ನೀಡಿರುವ/ನೀಡುವ ಯಾವುದೇ ಮಾಹಿತಿ/ದಾಖಲಾತಿಗಳು ಯಾವುದೇ ಸಮಯದಲ್ಲಿ ತಪ್ಪು/ನಕಲಿ ಎಂದು ಕಂಡುಬಂದಲ್ಲಿ ಕರ್ನಾಟಕ ನಾಗರಿಕ ಸೇವಾ(ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ 20 ರನ್ವಯ ಅಂತಹವರನ್ನು ಯಾವುದೇ ಮುನ್ಸೂಚನೆ ನೀಡದೇ ನೇಮಕಾತಿ ಆದೇಶವನ್ನು ರದ್ದುಪಡಿಸಿ, ತಕ್ಷಣದಿಂದಲೇ ಸೇವೆಯಿಂದ ತೆಗೆದು ಹಾಕಲು ಕ್ರಮ ಕೈಗೊಳ್ಳಲಾಗುವುದು.
14. ಪರೀಕ್ಷಾರ್ಥ ಅವಧಿಯಲ್ಲಿ ಯಾವುದೇ ವರ್ಗಾವಣೆಗೆ ಅವಕಾಶವಿರುವುದಿಲ್ಲ.
15. ನೇಮಕಾತಿ ಆದೇಶವನ್ನು ಪಡೆಯುವ ಸಂದರ್ಭದಲ್ಲಿ ಅಭ್ಯರ್ಥಿಯು ತಾನು ಒದಗಿಸಿರುವ ಎಲ್ಲಾ ಮಾಹಿತಿಯು ಸತ್ಯವೆಂದು ದೃಢೀಕರಣ ಪತ್ರ ಸಲ್ಲಿಸುವುದು.
16. ಒಬ್ಬರಿಗಿಂತ ಹೆಚ್ಚು ಪತ್ನಿ/ಪತಿಯೂ ಹೊಂದಿರುವುದಿಲ್ಲವೆಂದು ಅಭ್ಯರ್ಥಿಯಿಂದ ಮುಚ್ಚಳಿಕೆ ಪತ್ರ ಪಡೆಯುವುದು.
17. ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾಗುವ ಸಂದರ್ಭದಲ್ಲಿ ವಿದ್ಯಾರ್ಹತೆಯ ಬಗ್ಗೆ ಎಲ್ಲಾ ದಾಖಲಾತಿಗಳನ್ನು (SSLC/PUC/ಪದವಿ/ಸ್ನಾತಕೋತ್ತರ/ಬಿ.ಎಡ್/NET/SLET) ಹಾಗೂ ಜನ್ಮ ದಿನಾಂಕ ದೃಢೀಕರಿಸುವ ದಾಖಲಾತಿಗಳನ್ನು ಸಲ್ಲಿಸತಕ್ಕದ್ದು.
18. ಅಭ್ಯರ್ಥಿಗಳು ಕಾಲೇಜು ಶಿಕ್ಷಣ ಇಲಾಖೆಯ ಎಲ್ಲಾ ನಿಯಮಗಳು/ಮಾರ್ಗಸೂಚಿಗಳಿಗೆ/ಕೆ.ಸಿ.ಎಸ್.ಆರ್. ನಿಯಮಗಳಿಗೆ ಹಾಗೂ ಚಾಲ್ತಿಯಲ್ಲಿರುವ ಇತರೆ ಎಲ್ಲಾ ಸೇವಾ ನಿಯಮಗಳಿಗೆ ಬದ್ಧರಾಗಿರತಕ್ಕದ್ದು.
19. ಅಭ್ಯರ್ಥಿಯು ಭಾರತದ ಸಂವಿಧಾನದ ರೀತ್ಯಾ ನಿಷ್ಠೆಯ ಪ್ರಮಾಣ ವಚನ ಸ್ವೀಕರಿಸತಕ್ಕದ್ದು.
20. ಈ ನೇಮಕಾತಿ ಆದೇಶವು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ರಿಟ್ ಅರ್ಜಿಗಳ ಸಂಖ್ಯೆ:2034/2024, 1633/2024, 1900/2024, 1464/2024, 3455/2024, 5191/2024, 24247/2024 ರ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ ಹಾಗೂ ಸದರಿ ನೇಮಕಾತಿ ಅಧಿಸೂಚನೆಯ ಕುರಿತಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಎಲ್ಲಾ ಪೀಠಗಳಲ್ಲಿ ಹಾಗೂ ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯ ಎಲ್ಲಾ ಪೀಠಗಳಲ್ಲಿ ದಾಖಲಾಗಿರುವ ರಿಟ್ ಅರ್ಜಿ/ಅರ್ಜಿಗಳಲ್ಲಿ ಮಾನ್ಯ ನ್ಯಾಯಾಲಯಗಳು ನೀಡುವ ಅಂತಿಮ ತೀರ್ಪಿನ ಷರತ್ತಿಗೆ ಒಳಪಟ್ಟಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಂಜಯ್ ಬಿ ಎಸ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ(ಕಾಲೇಜು ಶಿಕ್ಷಣ)

PR-116

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297

FORM-IV
(SeeRule12)
This form should be Typed in English Only in Block Letters.

NOTICE

It is hereby Notified that the undersigned has changed his/her name from **ASMA BEGUM** to **ARPITHA K**

Date 31-07-2025

(Write the date in figures just like.....date1-5-1960)

Signature in the old name ASMA BEGUM

ASMA BEGUM
(Write down the name of the person in the Above space who has signed above).

Left hand thumb impression of

ASMA BEGUM
.....
.....

PD-v c/n-55

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು
THAMMAIAH